ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಬಂದಿರುವ ಅನುದಾನದಲ್ಲಿ ಅವ್ಯವಹಾರ ಕುರಿತು

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

180 (218) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ಪಣಸೂಲಿಯಿಂದ ಬೈಲ್‌ಪಾರ್ ವರೆಗಿನ ರಾಮ-ಲಕ್ಷ್ಮಣ ಗೌಳಿವಾಡಾ ರಸ್ತೆ ನಿರ್ಮಾಣವಾಗಿ 3 ತಿಂಗಳಲ್ಲೇ ಹದಗೆಟ್ಟಿದ್ದು ಸದರಿ ರಸ್ತೆ ನಿರ್ಮಾಣದಲ್ಲಿ ಕೋಟ್ಯಾಂತರ ರೂಪಾಯಿ ಅವ್ಯವಹಾರ ಆಗಿದ್ದು, ಇದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ;

(ವಿವರ ನೀಡುವುದು)

(ಆ) ಸದರಿ ರಸ್ತೆ ನಿರ್ಮಾಣಕ್ಕೆ ಮಂಜೂರಾಗಿರುವ ಅನುದಾನವೆಷ್ಟು; ಸದರಿ ರಸ್ತೆ ನಿರ್ಮಾಣ ಮಾಡಿರುವ ಗುತ್ತಿಗೆದಾರರ ವಿವರ, ಹಾಗೂ ಇದಕ್ಕೆ ಸಂಬಂಧಿಸಿದ ಅಧಿಕಾರಿ ವರ್ಗದವರ ವಿವರ ನೀಡುವುದು;

(ಇ) ಈ ರೀತಿ ಸರ್ಕಾರದ ಕೋಟ್ಯಾಂತರ ರೂಪಾಯಿ ಅವ್ಯವಹಾರ ಆಗಿರುವುದಕ್ಕೆ ಸಂಬಂಧಿಸಿದವರ ವಿರುದ್ಧ ಸರ್ಕಾರ ಕೂಡಲೇ ಶಿಸ್ತಿನ ಕ್ರಮಕೈಗೊಳ್ಳುವುದೇ; ಇಲ್ಲವೇ ಉನ್ನತ ತಂಡದಿಂದ ತನಿಖೆ ಮಾಡಿಸಿ ಕ್ರಮ ಕೈಗೊಳ್ಳುವುದೇ; (ಸವಿಸ್ತಾರ ವರದಿ ನೀಡುವುದು)

(ಈ) ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸುವುದೇ? (ವಿವರ ನೀಡುವುದು)